# ಹೆಚ್ಚುವರಿ ಸಿವಿಲ್ ಹಾಗೂ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಯಾದಗಿರಿ.

**ಉಪಸ್ಥಿತರುಃ- ಶ್ರೀ ರಾಹುಲ ರಾವ್ ಬಿ.ಎ.ಎಲ್.ಎಲ್.ಬಿ**
**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ,**

## ಸಿ.ಸಿ. ನಂಃ 486/2025

**ಫಿರ್ಯಾಧಿದಾರಃ  ಕರ್ನಾಟಕ ಸರ್ಕಾರದ ಪರವಾಗಿ ಯಾದಗಿರಿ (ಗ್ರಾ) ಪೊಲೀಸ್ ಠಾಣೆ**
**// ವಿರುದ್ದ //**

**ಆರೋಪಿತರು ಃ ಡೆಲವಿನ್**

## ದೋಷಾರೋಪಣೆ

**ಆರೋಪಿತರುಃ**

1. ಡೆಲವಿನ್ ಎಂ.ಎಲ್ ತಂದೆ ರಾಜೇಶ ಎಂ.ಎಲ್
   ಸಾಃ ಮಾಳಿಯಾಮಾವು ತಾಃ ಮತ್ತು ಜಿಃ ತ್ರಿಸ್ಸುರ ಕೇರಳ
   ಹಾಃ ಭಗವಾನ ಮಹಾವೀರ ಶಾಲೆ ಸೈದಾಪೂರ.

**ಆರೋಪಿತರಾದ ನಿಮ್ಮ ವಿರುದ್ಧ ದೋಷಿಸುವ ದೋಷಾರೋಪಣೆ ಏನೆಂದರೆ,**

ದಿನಾಂಕ 19.08.2024 ರಂದು ಮಃ 04-00 ಗಂಟೆ ಸುಮಾರಿಗೆ ಸೈದಾಪೂರ ಪೋಲಿಸ್ ಠಾಣೆ ಸರಹದ್ದಿಲ್ಲಿ ಬರುವ ಶ್ರೀ ಭಗವಾನ ಮಹಾವೀರ ಶಾಲೆಯ 4 ನೇ ತರಗತಿ ಕೋಣೆಯಲ್ಲಿ ಚಾಸಾಃ4 ನೇದ್ದವನು ಗಣಿತ ವಿಷಯದ ಟೆಸ್ಟನಲ್ಲಿ ಕಡಿಮೆ ಅಂಕ ಪಡೆದ ಕಾರಣ ಆರೋಪಿಯಾದ ನೀನು ಚಾಸಾಃ4 ರವರಿಗೆ ಜೋಳದ ಕಣಿಕೆ ದಂಟಿನಿಂದ ಬೆನ್ನಿಗೆ ಹೊಡೆದ ಬಗ್ಗೆ ಮತ್ತು ಸದರಿ ಬಾಲಕನ ಮೇಲೆ ಮಾಡಿದ್ದು, ಈ ಮೂಲಕ ಆರೋಪಿಯಾದ ನೀನು

ಭಾರತೀಯ ನ್ಯಾಯ ಸಂಹಿತೆ ಕಲಂ.118(1) ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

**2.** ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು ಬಾಲಕನ ಮೇಲೆ ಮಾಡಿದ ಹಲ್ಲೆಯು ಮಕ್ಕಳ ಹಕ್ಕುಗಳ ರಕ್ಷಣೆಗೆ ವಿರುದ್ಧವಾಗಿದ್ದು ತಪ್ಪಿತಸ್ಥ ಶಿಕ್ಷಕನ ವಿರುದ್ಧ ಹಲ್ಲೆ ಪ್ರಕ್ರರಣ ದಾಖಲಿಸಿದ್ದು, ಈ ಮೂಲಕ ಆರೋಪಿಯಾದ ನೀನು ಭಾರತೀಯ ದಂಡ ಸಂಹಿತೆ ಕಲಂ.75, 82 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

(ಮೇಲ್ಕಾಣಿಸಿದ ದೋಷಾರೋಪಣೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ ತೆರೆದ ನ್ಯಾಯಾಲಯದಲ್ಲಿ ಆರೋಪಿತರಿಗೆ ತಿಳಿಯವ ಭಾಷಯಲ್ಲಿ ಓದಿ ಹೇಳಲಾಯಿತು)

**ದಿನಾಂಕಃ 10-09-2025**
**ಸ್ಥಳಃ ಯಾದಗಿರಿ**

**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ**
**ನ್ಯಾಯಾಧೀಶರು ಯಾದಗಿರಿ.**